**ಕರ್ನಾಟಕ ಸರಕಾರ**

ಸಂ:ಬಿಜಿಎಂ:ಡಿಯುಡಿಸಿ:ಯುಪಿಎಸಿ:ಸಿಆರ್:1:2012-13

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ನಗರ ಬಡತನ ನಿರ್ಮೂಲನಾ ಕೋಶ,
ಬೆಳಗಾವಿ, ದಿನಾಂಕ:11.05.2012.

**ವಿಷಯ:-**ಪಟ್ಟಣ ಪಂಚಾಯತ ಹುಕ್ಕೇರಿ ವ್ಯಾಪ್ತಿಯಲ್ಲಿ 2012-13ನೇ ಸಾಲಿನ ಪಟ್ಟಣ ಪಂಚಾಯತ ಆದಾಯದಡಿ ಶೇ.7.25 ಮತ್ತು ಶೇ.3ರಡಿ ತೆಗೆದುಕೊಂಡ ಕಾರ್ಯಕ್ರಮ/ಕಾಮಗಾರಿಗಳ ಕ್ರಿಯಾ ಯೋಜನೆ ಅನುಮೋದನೆ ಕುರಿತು.

**ಓದಿತು:-**1)ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ:415:ಜಿಇಎಲ್:2011 ದಿನಾಂಕ:27.02.2012

2)ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ ಬೆಂಗಳೂರು ಸುತ್ತೋಲೆ ಸಂ:ಪೌನಿ:22.75:ಸುತ್ತೋಲೆ:2:2012-13 ದಿನಾಂಕ:24.04.2012

3)ಮುಖ್ಯಾಧಿಕಾರಿ, ಪಟ್ಟಣ ಪಂಚಾಯತ ಹುಕ್ಕೇರಿ ಇವರ ಪತ್ರ ಸಂಖ್ಯೆ:ಪಪಂಹು:ಪ್ರತಿಶತ 7.25 ಮತ್ತು ಪ್ರತಿಶತ 3:2012-13 ದಿನಾಂಕ:02.05.2012.

**ಪ್ರಸ್ತಾವನೆ:**

2012-13ನೇ ಸಾಲಿಗೆ ಪಟ್ಟಣ ಪಂಚಾಯತಿಯು ಸರ್ಕಾರದ ಸುತ್ತೋಲೆಯ ಮಾರ್ಗಸೂಚಿಗಳನ್ವಯ ಬಾಬ್ತುಗಳನ್ನು ಹೊರತುಪಡಿಸಿ ರೂ. 10,46,548/-ಗಳ ಆದಾಯವನ್ನು ಹೊಂದಿರುತ್ತದೆ. ಅದರಂತೆ ಓದಿತು (3)ರನ್ವಯ ಮುಖ್ಯಾಧಿಕಾರಿ, ಪಟ್ಟಣ ಪಂಚಾಯತ ಹುಕ್ಕೇರಿ ಇವರು ಪಟ್ಟಣ ಪಂಚಾಯತ ಆದಾಯದಲ್ಲಿ ಶೇ.7.25ರಷ್ಟು ನಗರದ ಇತರೆ ಬಡ ಜನರ ಕಲ್ಯಾಣ ಕಾರ್ಯಕ್ರಮಗಳಿಗೆ ರೂ.75,875/-ಗಳಲ್ಲಿ 02 ಕಾರ್ಯಕ್ರಮಗಳಿಗೆ ಹಾಗೂ ಶೇ.3%ರಷ್ಟು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಒಟ್ಟು ರೂ. 31,396/- ಗಳಲ್ಲಿ 01 ಕಾರ್ಯಕ್ರಮಗಳ ಕ್ರಿಯಾ ಯೋಜನೆ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ. ಅದರಂತೆ ಓದಿತು (1) ಮತ್ತು (2)ರ ಸರ್ಕಾರದ ಸುತ್ತೋಲೆ ಮಾರ್ಗಸೂಚಿಯಂತೆ ಪರಿಶೀಲಿಸಿದ ನಂತರ ಈ ಕೆಳಗಿನಂತೆ ಶೇ.7.25ರಷ್ಟು ನಗರದ ಇತರೆ ಬಡಜನರ ಕಲ್ಯಾಣ ನಿಧಿಗೆ ರೂ.75,875/-ಗಳಲ್ಲಿ 02 ಕಾರ್ಯಕ್ರಮಗಳಿಗೆ ಹಾಗೂ ಶೇ.3ರಷ್ಟು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗಾಗಿ ರೂ.31,396/-ಗಳಲ್ಲಿ 01 ಕಾರ್ಯಕ್ರಮಗಳ ಕ್ರಿಯಾ ಯೋಜನೆ ಅನುಮೋದನೆಗೆ ಪರಿಗಣಿಸಲಾಗಿದೆ.

| ಕ್ರ.ಸಂ | ಕಾರ್ಯಕ್ರಮಗಳ ಹೆಸರು | ಫಲಾನುಭವಿಗಳ ಸಂಖ್ಯೆ | ಅಂದಾಜು ಮೊತ್ತ (ರೂ. ಗಳಲ್ಲಿ) |
|---|---|---|---|
| | *2* | *3* | *4* |
| | **ಶೇ.7.25ರ ಇತರೆ ಬಡಜನರ ಕಲ್ಯಾಣ ಕಾರ್ಯಕ್ರಮ/ಕಾಮಗಾರಿಗಳು** | | |
| | **ವ್ಯಕ್ತಿ ಸಂಬಧಿತ ಅನೂಕೂಲತೆಗಳು ಶೇ. 40%** | | |
| 1 | ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಶೇಷ ಆರ್ಥಿಕ ನೆರವು ನೀಡುವುದು. | – | |
| | ಎಸ್.ಎಸ್.ಎಲ್.ಸಿ | 8 | 16000.00 |
| | ಪಿಯುಸಿ/ಉದ್ಯೋಗ ಆಧಾರಿತ/ಡಿಪ್ಲೋಮಾ | 5 | 15000.00 |
| | **ಸಮುದಾಯ ಸೌಲಭ್ಯಗಳು ಶೇ. 60%** | | |
| 1 | ಗಜಬರವಾಡಿ ಆಶ್ರಯ ಕಾಲನಿಯಲ್ಲಿ ಅಂಗನವಾಡಿ ಕೇಂದ್ರಕ್ಕೆ ಶೌಚಾಲಯ ನಿರ್ಮಾಣ ಮಾಡುವುದು. | – | 44875.00 |
| | **ಒಟ್ಟು** | | **75875.00** |
| | | | |
| | **ಶೇ.3ರ ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳು** | | |
| 1 | ಅಂಗವಿಕಲ ಸಣ್ಣ ಉದ್ದಿಮೆದಾರರಿಗೆ ಸಹಾಯಧನ ನೀಡುವುದು. | – | 31396.00 |
| | **ಒಟ್ಟು** | – | **31396.00** |

## ಆದೇಶ

ಮೇಲಿನ ಪ್ರಸ್ತಾವನೆಯಂತೆ ಪಟ್ಟಣ ಪಂಚಾಯತ ಹುಕ್ಕೇರಿ ವ್ಯಾಪ್ತಿಯಲ್ಲಿ 2012–13ನೇ ಸಾಲಿನ ಪಟ್ಟಣ ಪಂಚಾಯತ ಆದಾಯದಡಿ ಶೇ.7.25ರಷ್ಟು ನಗರದ ಇತರೆ ಬಡ ಜನರ ಕಲ್ಯಾಣ ಯೋಜನೆಯಡಿ ರೂ.75,875/–ಗಳಲ್ಲಿ 02 ಕಾರ್ಯಕ್ರಮಗಳಿಗೆ ಹಾಗೂ ಶೇ.3%ರಷ್ಟು ವಿಕಲಚೇತನರ ಕಲ್ಯಾಣ ಯೋಜನೆಯಡಿ ರೂ.31,396/–ಗಳಲ್ಲಿ 01 ಕಾರ್ಯಕ್ರಮವನ್ನು ಕೈಕೊಳ್ಳಲು ಕ್ರಿಯಾಯೋಜನೆ ಅನುಮೋದನೆ ನೀಡಿ ಓದಿತು (1) ಹಾಗೂ (2) ರ ಸರ್ಕಾರದ ಸುತ್ತೋಲೆಯ ನಿಬಂಧನೆ ಹಾಗೂ ಷರತ್ತುಗಳಿಗೆ ಅನುಗುಣವಾಗಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆದೇಶಿಸಿದೆ.

**ಸಹಿ/–**
**(ವಿ. ಅನ್ಬುಕುಮಾರ)**
ಜಿಲ್ಲಾಧಿಕಾರಿಗಳು, ಬೆಳಗಾವಿ

**ಪ್ರತಿ:**ಗೌರವಾದರಗಳೊಂದಿಗೆ ಆಯುಕ್ತರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಾದರಪಡಿಸಿದೆ.
**ಪ್ರತಿ:**ಕಾರ್ಯಪಾಲಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಳಗಾವಿ
**ಪ್ರತಿ:**ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ ಹುಕ್ಕೇರಿ ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

**ಸಹಿ/–**
ಯೋಜನಾ ನಿರ್ದೇಶಕರು
ಜಿಲ್ಲಾ ನಗರಾಭಿವೃದ್ಧಿ ಕೋಶ,
ಜಿಲ್ಲಾಧಿಕಾರಿಗಳ ಕಾರ್ಯಾಲಯ ಬೆಳಗಾವಿ.